# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ತುಮಕೂರು ನಗರದ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆಗೆ (ಪರಿಷ್ಕೃತ-II) ಸರ್ಕಾರದ ಅಂತಿಮ ಅನುಮೋದನೆ ನೀಡುವ ಕುರಿತು.

ಓದಲಾಗಿದೆ: 1)ಸರ್ಕಾರದ ಆದೇಶ ಸಂಖ್ಯೆ:ನಅಇ/270/ಬೆಂರೂಪ್ರಾ/2009, ಬೆಂಗಳೂರು ದಿನಾಂಕ:28.10.2009

2) ತುಮಕೂರು ನಗರಾಭಿವೃದ್ಧಿ ಪ್ರಾಧಿಕಾರದ ಪತ್ರ ಸಂಖ್ಯೆ:ತುನಪ್ರಾ/ ನ.ಯೋಸ./ಮ.ಯೋ/01/1356/2007-08 ದಿನಾಂಕ:21.10.2010

3) ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಕಛೇರಿಯ ಏಕ ಕಡತ ಸಂಖ್ಯೆ:ನಗ್ರಾಯೋ(21)/ಉನಿ(ಯೋವಿ)ತುಮಕೂರು/ ಮ.ಯೋ(ಪ.II) 2010-11 ದಿನಾಂಕ:21.10.2010 ರಲ್ಲಿ ನೀಡಿರುವ ಅಭಿಪ್ರಾಯ.

576
16/3/11

*****

**ಪ್ರಸ್ತಾವನೆ:**

ಮೇಲೆ ಓದಲಾದ(1)ರ ಸರ್ಕಾರಿ ಆದೇಶದಲ್ಲಿ ತುಮಕೂರು ನಗರದ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆಗೆ (ಪರಿಷ್ಕೃತ-II)ಗೆ ತಾತ್ಕಾಲಿಕ ಅನುಮೋದನೆ ನೀಡಲಾಗಿದೆ.

ಮೇಲೆ ಓದಲಾದ (2)ರ ಪತ್ರದಲ್ಲಿ ತುಮಕೂರು ನಗರಾಭಿವೃದ್ಧಿ ಪ್ರಾಧಿಕಾರವು ತುಮಕೂರು ನಗರದ ಸ್ಥಳೀಯ ಯೋಜನಾ ಪ್ರದೇಶಕ್ಕೆ ತಯಾರಿಸಿರುವ ಮಹಾ ಯೋಜನೆ (ಪರಿಷ್ಕೃತ-II) ಕುರಿತು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(1)ರನ್ವಯ ಅಗತ್ಯ ಕ್ರಮ ಜರುಗಿಸಿ ಮಹಾ ಯೋಜನೆಯ ನಕ್ಷೆಗಳನ್ನು ಹಾಗೂ ವರದಿಯನ್ನು ತಯಾರಿಸಿ ಸರ್ಕಾರದ ಅಂತಿಮ ಅನುಮೋದನೆಗೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (3)ರ ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಕಛೇರಿಯ ಏಕ ಕಡತದಲ್ಲಿ ತುಮಕೂರು ನಗರದ ಜನಸಂಖ್ಯೆಯು 2031 ರಲ್ಲಿ 9,50,000 ಗಳಷ್ಟು ಬೆಳವಣಿಗೆಯಾಗುವುದಾಗಿ ಅಂದಾಜಿಸಿ ಮಹಾ ಯೋಜನೆಯನ್ನು ತಯಾರಿಸಲಾಗಿದೆ. ತುಮಕೂರು ನಗರದ ಸ್ಥಳೀಯ ಯೋಜನಾ ಪ್ರದೇಶದ 310.00 ಹೆಕ್ಟೇರ್ ಪ್ರದೇಶದಲ್ಲಿ 12944.89 ಹೆಕ್ಟೇರ್ ಪ್ರದೇಶವನ್ನು ನಗರೀಕರಣದ ಎಲ್ಲೆಯೆಂದು ಪ್ರಸ್ತಾಪಿಸಿ ಯೋಜನೆಯನ್ನು ರೂಪಿಸಲಾಗಿದೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 12 ರಲ್ಲಿನ ಅಂಶಗಳನ್ನು ಪರಿಗಣಿಸಿ, ನಗರದ ಮುಂದಿನ ಯೋಜಿತ ಬೆಳವಣಿಗೆಗಳಿಗಾಗಿ ಪ್ರಸ್ತಾಪಿಸಿರುವ 11774.74 ಹೆಕ್ಟೇರ್ ಪ್ರದೇಶದಲ್ಲಿ ವಸತಿಗಾಗಿ 6451.52 ಹೆಕ್ಟೇರ್ (ಶೇ.54.92), ವಾಣಿಜ್ಯಕ್ಕಾಗಿ 479.99 ಹೆಕ್ಟೇರ್ (ಶೇ.4.08), ಕೈಗಾರಿಕೆಗಾಗಿ 1002.41 ಹೆಕ್ಟೇರ್ (ಶೇ.8.51), ಸಾರ್ವಜನಿಕ / ಅರೆ ಸಾರ್ವಜನಿಕ ಉಪಯೋಗಕ್ಕೆ 872.80 ಹೆಕ್ಟೇರ್ (ಶೇ.7.41), ಉದ್ಯಾನವನ / ಬಯಲು ಜಾಗಗಳಿಗೆ 997.87 ಹೆಕ್ಟೇರ್ (ಶೇ.8.47), ಸಾರ್ವಜನಿಕ ಉಪಯುಕ್ತತೆಗಾಗಿ 44.41 ಹೆಕ್ಟೇರ್ (ಶೇ.0.38) ಹಾಗೂ ಸಾರಿಗೆ / ಸಂಪರ್ಕ ವಲಯಕ್ಕೆ 1925.41 ಹೆಕ್ಟೇರ್ (ಶೇ.16.36) ಪ್ರದೇಶವನ್ನು ನಿಗಧಿಪಡಿಸಲಾಗಿದೆ. ಮಹಾ ಯೋಜನೆ (ಪರಿಷ್ಕೃತ-II) ಅನುಷ್ಠಾನಕ್ಕೆ ತರಲು ಅಗತ್ಯ ವಿರುವ ವಲಯ ನಿಯಮಾವಳಿಗಳನ್ನು ರೂಪಿಸಲಾಗಿದ್ದು ಮಹಾಯೋಜನೆಗೆ ಕರ್ನಾಟಕ ನಗರ ಮತ್ತು

..2

ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(3)ರನ್ವಯ ಅಂತಿಮ ಅನುಮೋದನೆ ನೀಡಲು ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ. ಪ್ರಸ್ತಾವನೆಯನ್ನು ಪರಿಶೀಲಿಸಿದ ನಂತರ ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

<u>ಸರ್ಕಾರದ ಆದೇಶ ಸಂಖ್ಯೆ:ನಅಇ 377 ಬೆಂರೂಪ್ರಾ 2010, ಬೆಂಗಳೂರು, ದಿನಾಂಕ:10.03.2011</u>

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ತುಮಕೂರು ನಗರದ ಸ್ಥಳೀಯ ಯೋಜನಾ ಪ್ರದೇಶಕ್ಕೆ ರೂಪಿಸಿರುವ ಮಹಾ ಯೋಜನೆ (ಪರಿಷ್ಕೃತ-II)ನ್ನು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(3)ರನ್ವಯ ಈ ಕೆಳಗಿನ ನಿಬಂಧನೆಗಳಿಗೊಳಪಟ್ಟು ಅಂತಿಮ ಅನುಮೋದನೆಯನ್ನು ನೀಡಲಾಗಿದೆ.

1. ತುಮಕೂರು ತಾಲ್ಲೂಕು ಊರ್ಡಿಗೆರೆ ಹೋಬಳಿ ಮೈದಾಳ ಅಮಾನಿಕೆರೆ ಗ್ರಾಮದ ಸ.ನಂ. 271ರ ಭಾಗಶ: ಹಾಗೂ ಸ.ನಂ. 273ರ ಜಮೀನುಗಳ ಭೂ ಉಪಯೋಗವನ್ನು ವಸತಿ ವಲಯವೆಂದು ಪರಿಗಣಿಸತಕ್ಕದ್ದು.
2. ತುಮಕೂರು ಅಮಾನಿಕೆರೆ ಗ್ರಾಮದ ಸ.ನಂ.23/1ರ ಜಮೀನಿನ ಭೂ ಉಪಯೋಗವನ್ನು ವಸತಿ ವಲಯವೆಂದು ಪರಿಗಣಿಸತಕ್ಕದ್ದು.

ಮಹಾ ಯೋಜನೆ (ಪರಿಷ್ಕೃತ-II)ಗೆ ಅಂತಿಮ ಅನುಮೋದನೆ ನೀಡಿದ ಗುರುತಾಗಿ ವರದಿ ಹಾಗೂ ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಂ.ಎಂ.ಹಿರೇಮಠ)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ.

ಇವರಿಗೆ:

1. ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬೆಂಗಳೂರು.
2. ಅಧ್ಯಕ್ಷರು / ಆಯುಕ್ತರು, ತುಮಕೂರು ನಗರಾಭಿವೃದ್ಧಿ ಪ್ರಾಧಿಕಾರ, ತುಮಕೂರು.
3. ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರು, ತುಮಕೂರು ಇವರಿಗೆ ಮಾಹಿತಿಗಾಗಿ.
4. ಕರ್ನಾಟಕ ರಾಜ್ಯ ಪತ್ರ.
5. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.